**Akashvani : Bangalore**
**Regional Bulletin In Kannada**
**05.04.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.04.2026 / 18.40 hrs**

***************

ಮುಖ್ಯಾಂಶಗಳು

೧. ಆಲಮಟ್ಟಿ ಯೋಜನೆಗೆ ಕಾಂಗ್ರೆಸ್ ಸರ್ಕಾರದ ಅಡಿಗಲ್ಲು, ಅಣೆಕಟ್ಟಿನ ಮೂಲಕ ೧೨೦ ಟಿಎಂಸಿ ನೀರು ಸಂಗ್ರಹ - ಸಚಿವ ಎಚ್.ಕೆ.ಪಾಟೀಲ್

೨. ವಿಧಾನಸಭೆ ಉಪಚುನಾವಣೆ ; ಬಹಿರಂಗ ಪ್ರಚಾರ ಅಂತ್ಯಕ್ಕೆ ದಿನಗಣನೆ

೩. ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ್ ರಾಂ ಜನ್ಮದಿನ ; ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹಲವು ಕಾರ್ಯಕ್ರಮ

೪. ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟ ; ರಾಜ್ಯದ ಒಟ್ಟು ೫ ಕ್ರೀಡಾಪಟುಗಳಿಗೆ ಪ್ರಶಸ್ತಿ

***************

೧೯೭೫ ರಿಂದಲೇ ಆಲಮಟ್ಟಿ ಯೋಜನೆಗೆ ಕಾಂಗ್ರೆಸ್ ಸರ್ಕಾರ ಅಡಿಗಲ್ಲು ಹಾಕಿದ್ದು, ಡ್ಯಾಂ ನಿರ್ಮಾಣ ಹಾಗೂ ಗೇಟ್ ಅಳವಡಿಕೆ ಮೂಲಕ ೧೯.೬ ಮೀಟರ್ ಎತ್ತರದಲ್ಲಿ ನೀರು ಸಂಗ್ರಹಣೆ ಸಾಧ್ಯವಾಗಿದೆ. ಸುಮಾರು ೧೨೦ ಟಿಎಂಸಿ ನೀರನ್ನು ತಡೆಹಿಡಿದಿರುವುದು ಕಾಂಗ್ರೆಸ್ ಸಾಧನೆ ಎಂದು ಪ್ರವಸೋದ್ಯಮ ಸಚಿವ ಎಚ್.ಕೆ.ಪಾಟೀಲ್ ಹೇಳಿದರು.

ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಸಚಿವ ಎಚ್.ಕೆ. ಪಾಟೀಲ ಅವರು ಬಿಜೆಪಿ ವಿರುದ್ಧ ಟೀಕೆ ವ್ಯಕ್ತಪಡಿಸಿದರು.

ತಮ್ಮ ನೀರಾವರಿ ಸಚಿವ ಅವಧಿಯಲ್ಲಿ ಯೋಜನೆಗಳಿಗೆ ಸಾವಿರಾರು ಕೋಟಿ ರೂಪಾಯಿ ವೆಚ್ಚ ಮಾಡಿದ್ದು, ಕೃಷ್ಣಾ ನದಿಯಲ್ಲಿ ಮೊದಲ ಬಾರಿಗೆ ನೀರು ನಿಲ್ಲಿಸಿ ಲಕ್ಷಾಂತರ ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ ಎಂದು ವಿವರಿಸಿದರು.

ಬಚಾವತ್ ಅವಾರ್ಡ್ ಪ್ರಕಾರ ರಾಜ್ಯಕ್ಕೆ ದೊರಕಬೇಕಾದ ನೀರಿನ ಹಂಚಿಕೆ ಹಾಗೂ ನಂತರದ ಟ್ರಿಬ್ಯೂನಲ್ ತೀರ್ಪುಗಳ ಅನುಷ್ಠಾನದಲ್ಲಿ ವಿಳಂಬವಾಗಿದೆ. ಇದರಿಂದ ಕರ್ನಾಟಕಕ್ಕೆ ಅನ್ಯಾಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ದೂಧಗಂಗಾ, ಭೀಮ ಸರಣಿ ಬ್ಯಾರೇಜ್, ಹಿಪ್ಪರಗಿ ಬ್ಯಾರೇಜ್ ಸೇರಿದಂತೆ ಹಲವು ನೀರಾವರಿ ಯೋಜನೆಗಳು ಕಾಂಗ್ರೆಸ್ ಸರ್ಕಾರದ ಕೊಡುಗೆ ಎಂದು ಹೇಳಿದರು.

ಕೇಂದ್ರ ಸರ್ಕಾರದಿಂದ ಅಕ್ಕಿ ಪೂರೈಕೆ ವಿಳಂಬವಾದರೂ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದೆ. ಇದರಿಂದ ಬಡತನ ನಿವಾರಣೆಯಲ್ಲಿ ಪ್ರಗತಿ ಕಂಡುಬಂದಿದೆ ಎಂದು ಅವರು ತಿಳಿಸಿದರು.

***************

ಮಾಜಿ ಉಪಪ್ರಧಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ರವರ ೧೧೯ನೇ ಜನ್ಮ ದಿನಾಚರಣೆಯನ್ನು ರಾಜ್ಯದ ಹಲವು ಜಿಲ್ಲೆಗಳಲ್ಲಿ ಆಚರಿಸಲಾಗುತ್ತಿದೆ.

ಹಸಿರು ಕ್ರಾಂತಿಯ ಹರಿಕಾರ ಮಾಜಿ ಉಪ ಪ್ರಧಾನಿ ಬಾಬು ಜಗ ಜೀವನರಾಮ್ ಅವರು ಸಾಮಾನ್ಯ ಬಡತನದಲ್ಲಿ ಹುಟ್ಟಿ, ಜಾತಿ ಪದ್ದತಿಯ ಎಲ್ಲಾ ನೋವು ಅವಮಾನಗಳನ್ನು ಸ್ವತಃ ಅನುಭವಿಸಿ ನಂತರ ಸಮಾಜವನ್ನು ದಿಟ್ಟತದಿಂದ ಎದುರಿಸಿ ದನಿ ಇಲ್ಲದವರ ದನಿಯಾದಗಲು ಹೋರಾಟ ನಡೆಸಿದರು ಎಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಸಂಸದ ಡಾ.ಕೆ.ಸುಧಾಕರ್ ಗುಣಗಾನ ಮಾಡಿದರು.

ಚಿಕ್ಕಬಳ್ಳಾಪುರದ ಕನ್ನಡ ಭವನದಲ್ಲಿ ಜಿಲ್ಲಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಡಾ. ಬಾಬು ಜಗಜೀವನರಾಮ್ ಅವರ ೧೧೯ ಜಯಂತಿ ಕಾರ್ಯಕ್ರಮವನ್ನು ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಮ್ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಬೆಳಗಾವಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆಯ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಇಂದು ಬೆಳಗಾವಿಯ ಸಂಗಮೇಶ್ವರ ನಗರದ ಡಾ. ಬಾಬು ಜಗಜೀವನ್ ರಾಮ್ ಉದ್ಯಾನವನದಲ್ಲಿ ಹಸಿರುಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ಜಯಂತಿ ಉತ್ಸವ ನಡೆಸಲಾಯಿತು.

ಉತ್ಸವದಲ್ಲಿ ಪಾಲ್ಗೊಂಡಿದ್ದ ಪೊಲೀಸ್ ಆಯುಕ್ತ ಭೂಷಣ್ ಗುಲಾಬರಾವ್ ಬೊರಸೆ ಮಾತನಾಡಿ ಜಗಜೀವನ ರಾಮ್ ಅವರ ಜೀವನ ಸಾಧನೆ ಯುವಕರಿಗೆ ಸ್ಪೂರ್ತಿದಾಯಕ. ಅವರ ಆದರ್ಶಗಳು ಸಮಾನತೆ, ಸಮಭಾವ ಮೂಡಿಸುತ್ತವೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್ ಮಾತನಾಡಿ, ದೇಶ ಕಂಡ ಅಪ್ರತಿಮ ನಾಯಕರಲ್ಲಿ ಜಗಜೀವನ್ ರಾಮ್ ಒಬ್ಬರು, ಕಾರ್ಮಿಕರಿಗೆ ಅನೇಕ ಕಾನೂನು ಗಳನ್ನು ಜಾರಿಗೆ ತಂದರು, ಸಮಸ್ಯೆ ಹೇಳುವರು ನಾಯಕರಲ್ಲ ಸಮಸ್ಯೆಗಳನ್ನು ಪರಿಹರಿಸುವ ವ್ಯಕ್ತಿಗಳು ನಾಯಕರಾಗುತ್ತಾರೆ ಎಂದರು.

ಡಾ.ಬಾಬು ಜಗಜೀವನ್ ರಾಂ ರವರ ಚಿಂತನೆಗಳನ್ನು ಆದರ್ಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ಅವರ ಚಿಂತನೆ, ಆದರ್ಶ, ಮೌಲ್ಯಗಳನ್ನು ತಿಳಿಸುವಂತಹ ಕೆಲಸವಾಗಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಸಿರು ಕ್ರಾಂತಿಯ ಹರಿಕಾರ ಹಾಗೂ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ ರಾಂ ರವರ ೧೧೯ನೇ ಜನ್ಮ ದಿನಾಚರಣೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿ ಆಚರಿಸಲಾಯಿತು. ಡಾ. ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದ ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ, ಡಾ. ಬಾಬು ಜಗಜೀವನ್ ರಾಮ್ ಅವರು ಭಾರತದ ಸ್ವಾತಂತ್ರ್ಯ ಹೋರಾಟಗಾರ, ಶೋಷಿತ ವರ್ಗಗಳ ನಾಯಕ, ಮಾಜಿ ಉಪ ಪ್ರಧಾನಿ ಮತ್ತು ಹಸಿರು ಕ್ರಾಂತಿಯ ಹರಿಕಾರರಾಗಿದ್ದಾರೆ ಎಂದರು.

***************

ಡಾ. ಬಾಬು ಜಗಜೀವನ ರಾಮ್ ಅವರು ಕೃಷಿ ಸಚಿವ, ರಕ್ಷಣಾ ಸಚಿವ ಹಾಗೂ ಇನ್ನಿತರ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸಿದ್ದು, ಅವರು ಕಾರ್ಯನಿರ್ವಹಿಸಿದ ಎಲ್ಲಾ ಕ್ಷೇತ್ರದಲ್ಲೂ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದು ಮೈಸೂರು ಶಾಸಕ ಕೆ.ಹರೀಶ್ ಗೌಡ ಅವರು ಹೇಳಿದ್ದಾರೆ.

ಅವರಿಂದು ಮೈಸೂರು ಜಿಲ್ಲಾಡಳಿತ, ಹಾಗೂ ವಿವಿಧ ಇಲಾಖೆಗಳ ವತಿಯಿಂದ ಆಯೋಜಿಸಲಾಗಿದ್ದ, ಡಾ. ಬಾಬು ಜಗಜೀವನರಾಮ್ ಅವರ ೧೧೯ನೇ ಜನ್ಮ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಶೋಷಿತ ಹಾಗೂ ದಲಿತ ವರ್ಗದವರು ಇಂದು

ಸಮಾಜದಲ್ಲಿ ಸಮಾನತೆ ಹಾಗೂ ಸ್ವತಂತ್ರವಾಗಿ ಇರುವುದಕ್ಕೆ ಡಾ. ಬಾಬು ಜಗಜೀವನ ರಾಮ್ ಅವರು ಮುಖ್ಯ ಪಾತ್ರ ವಹಿಸಿದ್ದಾರೆ ಎಂದರು.

***************

ದಾವಣಗೆರೆ ವಿಧಾನಸಭಾ ಉಪಚುನಾವಣೆ ಬಹಿರಂಗ ಪ್ರಚಾರದ ಅಂತ್ಯಕ್ಕೆ ಕ್ಷಣಗಣನೆ ಆರಂಭಗೊಂಡಿದ್ದು, ಈ ಹಿನ್ನಲೆಯಲ್ಲಿ ಕಣದಲ್ಲಿರುವ ಅಭ್ಯರ್ಥಿಗಳ ಪ್ರಚಾರ ಕಾರ್ಯ ಮತ್ತಷ್ಟು ಬಿರುಸು ಪಡೆದಿದೆ.

ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಕ್ಷೇತ್ರದ ವಿವಿಧ ಕಡೆಗಳಲ್ಲಿಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಎಂ.ಪಿ.ರೇಣುಕಾಚಾರ್ಯ, ಕೇಂದ್ರ ಮಾಜಿ ಸಚಿವ ಡಾ.ಜಿ.ಎಂ.ಸಿದ್ದೇಶ್ವರ ಮತ ಯಾಚಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಸಮರ್ಥ ಮಲ್ಲಿಕಾರ್ಜುನ್ ಪರವಾಗಿ ರಾಜ್ಯ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ವಿಧಾನ ಪರಿಷತ್ ಸದಸ್ಯ ಸಲೀಂ ಅಹಮದ್, ಶಾಸಕ ರಿಜ್ವಾನ್ ಹರ್ಷದ್ ಸೇರಿದಂತೆ ಹಲವು ಶಾಸಕರು ಮತ ಯಾಚಿಸಿದರು.

***************

ಛತಿಸ್‌ಗಡ್ ರಾಜ್ಯದ ಜಗದಲ್ ಪುರ್‌ನಲ್ಲಿ ಈ ಭಾರಿ ನಡೆದ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟದಲ್ಲಿ ರಾಜ್ಯದ ಒಟ್ಟು ೫ ಕ್ರೀಡಾಪಟುಗಳು ವಿವಿಧ ಕ್ರೀಡೆಗಳಲ್ಲಿ ಗೆಲುವು ಸಾಧಿಸಿ ಪ್ರಶಸ್ತಿ ಪಡೆದಿದ್ದಾರೆ ಎಂದು ಖೇಲೋ ಇಂಡಿಯಾ ಅಥ್ಲೆಟಿಕ್ ಕ್ರೀಡಾಕೂಟದ ತರಬೇತುದಾರ ಜಿ.ಸಿ.ಪರಮೇಶ್ವರ ರಾಜ್ ಅರಸ್ ತಿಳಿಸಿದ್ದಾರೆ.

ಚಿಕ್ಕಮಗಳೂರು ನಗರದಲ್ಲಿ ಸುದ್ದಿಗಾರರೊಂದಿಗೆ ಮಾಹಿತಿ ನೀಡಿದ ಅವರು, ರಾಜ್ಯದವರಾದ ರೀತುಶ್ರೀ, ನಾಗಿನಿ, ದಶರಥ ನಿಂಗಪ್ಪ ತಳವಾರ್, ದರ್ಶನ್ ಬರ್ಮಪ್ಪ ಬಾಗಾಡಿ ಇವರುಗಳು ಓಟದ ಸ್ಪರ್ಧೆ, ನಡಿಗೆ ಸ್ಪರ್ಧೆಯಲ್ಲಿ ಗೆಲುವು ಸಾಧಿಸಿದ್ದಾರೆ ಹಾಗೂ ಮಹಿಳಾ ವಿಭಾಗದಲ್ಲಿ ರನ್ನರ್ ಅಫ್ ಪ್ರಶಸ್ತಿಯನ್ನು ಪಡೆದುಕೊಂಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

***************

ನಂಬಿಕೆಯ ಬಲವರ್ಧನೆ ಮತ್ತು ಕಾನೂನುಗಳ ಸರಳೀಕರಣಕ್ಕಾಗಿ ಜನ ವಿಶ್ವಾಸ (ನಿಬಂಧನೆಗಳ ತಿದ್ದುಪಡಿ) ಮಸೂದೆ ೨೦೨೬ ಜಾರಿಗೆ ಸರ್ಕಾರ ಮುಂದಾಗಿದೆ.

೭೯ ಕೇಂದ್ರ ಕಾಯ್ದೆಗಳಡಿಯ ಸಾವಿರಕ್ಕೂ ಹೆಚ್ಚು ಸಣ್ಣಪುಟ್ಟ ಲೋಪಗಳನ್ನು ಅಪರಾಧ ಮುಕ್ತಗೊಳಿಸುವ ಮೂಲಕ ನಾಗರಿಕರು ಮತ್ತು ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ - ಎಂಎಸ್‌ಎಂಇ ಗಳಿಗೆ ಹೆಚ್ಚಿನ ಆರ್ಥಿಕ ಹಾಗೂ ಸಾಮಾಜಿಕ ಭದ್ರತೆ ಒದಗಿಸಲು ಸರ್ಕಾರ ಕಾರ್ಯಪ್ರವೃತ್ತವಾಗಿದೆ.

ಇದರಡಿ ೭೧೭ ನಿಬಂಧನೆಗಳಡಿಯಲ್ಲಿನ ಬಂಧನ ಶಿಕ್ಷೆಯನ್ನು ಸಣ್ಣ ಮೊತ್ತದ ದಂಡ ಮತ್ತು ಆಡಳಿತಾತ್ಮಕ ಕ್ರಮಕ್ಕೆ ಬದಲಿಸಲಾಗಿದೆ.

ದೈನಂದಿನ ಸಣ್ಣಪುಟ್ಟ ದೋಷಗಳಿಗೆ ಕ್ರಿಮಿನಲ್ ಪ್ರಕರಣ ದಾಖಲಿಸುವ ಬದಲು  ನಾಗರಿಕ ಸ್ನೇಹಿ ಸುಧಾರಣೆಗಳನ್ನು ಪರಿಚಯಿಸಲಾಗಿದೆ.

ಸುಲಲಿತ ಜೀವನ ಸಾಧ್ಯವಾಗಿಸುವ ಚಾಲನಾ ಪರವಾನಗಿಗೆ ೩೦ ದಿನಗಳ ಹೆಚ್ಚುವರಿ ಗ್ರೇಸ್ ಅವಧಿ ಮತ್ತಿತರ ಸರಳ ನಿಯಮಗಳನ್ನು ಜಾರಿಗೊಳಿಸುತ್ತಾ ಪ್ರಸ್ತುತದ ಕಾಲಘಟ್ಟಕ್ಕೆ ಸರಿಹೊಂದದ ಹಳೆಯ ನಿಯಮಗಳನ್ನು ತೆಗೆದು ಹಾಕುತ್ತಾ ಪ್ರಕರಣಗಳ ತ್ವರಿತ ವಿಲೇವಾರಿ ಖಚಿತಪಡಿಸುವ ಗುರಿಯನ್ನು ಈ ಮಸೂದೆ ಹೊಂದಿದೆ.

***************

ಕೊಡಗಿನ ತಡಿಯಾಂಡಮೋಳ್‌ಗೆ ಚಾರಣಕ್ಕೆ ಬಂದಿದ್ದ ಕೇರಳದ ಮಹಿಳೆ ಜಿ.ಎಸ್.ಶರಣ್ಯ ಪತ್ತೆಗೆ ರಾಜ್ಯ ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆ ಅವರ ಸೂಚನೆಯಂತೆ, ಇಂದು ಹೆಚ್ಚುವರಿಯಾಗಿ ೪೦ ಸಿಬ್ಬಂದಿಯ ೪ ತಂಡ ನಿಯೋಜಿಸಲಾಗಿದೆ  ಡ್ರೋನ್ ಕ್ಯಾಮರಾ ಬಳಸುವಂತೆ ಸಚಿವರ ತಿಳಿಸಿದ್ದು ಒಟ್ಟು ೯ ತಂಡದಿಂದ ಕಾರ್ಯಾಚರಣೆ ನಡೆಯುತ್ತಿದೆ ಎಂದು ಕೊಡಗು ಪೊಲೀಸ್ ವರಿಷ್ಠಾಧಿಕಾರಿ ಬಿಂದುಮಣಿ ತಿಳಿಸಿದ್ದಾರೆ.

ಚಾರಣಕ್ಕಾಗಿ ಕೇರಳದಿಂದ ಒಬ್ಬರೇ ಆಗಮಿಸಿ, ಕಕ್ಕಬ್ಬೆ ಗ್ರಾಮದಲ್ಲಿ ಖಾಸಗಿ ಹೋಂಸ್ಟೇಯಲ್ಲಿ ತಂಗಿದ್ದ ಶರಣ್ಯ ಗೈಡ್ ಹಾಗೂ ಇನ್ನಿತರ ೧೫ ಚಾರಣಿಗರೊಂದಿಗೆ ಕಳೆದ ಗುರುವಾರ ಕೊಡಗಿನ ಎತ್ತರದ ಗಿರಿಶ್ರೇಣಿ ತಡಿಯಂಡಮೋಳ್ ಬೆಟ್ಟಕ್ಕೆ ತೆರಳಿದ್ದರು. ಅಂದು ಮಧ್ಯಾಹ್ನ ಆಕೆ ಕಾಣೆಯಾಗಿದ್ದು, ವಿಷಯ ತಿಳಿದ ಕೂಡಲೇ ಪೊಲೀಸರು, ನಕ್ಸಲ್ ನಿಗ್ರಹದಳ, ಶ್ವಾನದಳ ಮತ್ತು

ಅರಣ್ಯ ಸಿಬ್ಬಂದಿ ಸೇರಿ ೫೦ ಜನರ ಐದು ತಂಡಗಳು ಶೋಧ ನಡೆಸುತ್ತಿವೆ, ಶರಣ್ಯ ನಾಪತ್ತೆಯಾಗಿ ೪ ದಿನಗಳಾದರೂ ಯಾವುದೇ ಸುಳಿವು ದೊರಕದ ಹಿನ್ನಲೆಯಲ್ಲಿ ಶೋಧ ಕಾರ್ಯಾಚರಣೆಗೆ ಮತ್ತಷ್ಟು ಜನರನ್ನು ಆಧುನಿಕ  ಥರ್ಮಲ್ ಡ್ರೋಣ್ ನಂಥ ಯಂತ್ರೋಪಕರಣಗಳೊಂದಿಗೆ ನಿಯೋಜಿಸಲಾಗಿದೆ.

***************

ಕೊಡಗಿನ ತಡಿಯಾಂಡಮೋಳ್‌ಗೆ ಚಾರಣಕ್ಕೆ ಬಂದಿದ್ದ ಕೇರಳದ ಮಹಿಳೆ ಜಿ.ಎಸ್.ಶರಣ್ಯ ಪತ್ತೆಗೆ ರಾಜ್ಯ ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆ ಅವರ ಸೂಚನೆಯಂತೆ, ಇಂದು ಹೆಚ್ಚುವರಿಯಾಗಿ ೪೦ ಸಿಬ್ಬಂದಿಯ ೪ ತಂಡ ನಿಯೋಜಿಸಲಾಗಿದೆ  ಡ್ರೋನ್ ಕ್ಯಾಮರಾ ಬಳಸುವಂತೆ ಸಚಿವರ ತಿಳಿಸಿದ್ದು ಒಟ್ಟು ೯ ತಂಡದಿಂದ ಕಾರ್ಯಾಚರಣೆ ನಡೆಯುತ್ತಿದೆ ಎಂದು ಕೊಡಗು ಪೊಲೀಸ್ ವರಿಷ್ಠಾಧಿಕಾರಿ ಬಿಂದುಮಣಿ ತಿಳಿಸಿದ್ದಾರೆ.

ಚಾರಣಕ್ಕಾಗಿ ಕೇರಳದಿಂದ ಒಬ್ಬರೇ ಆಗಮಿಸಿ, ಕಕ್ಕಬ್ಬೆ ಗ್ರಾಮದಲ್ಲಿ ಖಾಸಗಿ ಹೋಂಸ್ಟೇಯಲ್ಲಿ ತಂಗಿದ್ದ ಶರಣ್ಯ ಗೈಡ್ ಹಾಗೂ ಇನ್ನಿತರ ೧೫ ಚಾರಣಿಗರೊಂದಿಗೆ ಕಳೆದ ಗುರುವಾರ ಕೊಡಗಿನ ಎತ್ತರದ ಗಿರಿಶ್ರೇಣಿ ತಡಿಯಂಡಮೋಳ್ ಬೆಟ್ಟಕ್ಕೆ ತೆರಳಿದ್ದರು. ಅಂದು ಮಧ್ಯಾಹ್ನ ಆಕೆ ಕಾಣೆಯಾಗಿದ್ದು, ವಿಷಯ ತಿಳಿದ ಕೂಡಲೇ ಪೊಲೀಸರು, ನಕ್ಸಲ್ ನಿಗ್ರಹದಳ, ಶ್ವಾನದಳ ಮತ್ತು ಅರಣ್ಯ ಸಿಬ್ಬಂದಿ ಸೇರಿ ೫೦ ಜನರ ಐದು ತಂಡಗಳು ಶೋಧ ನಡೆಸುತ್ತಿವೆ, ಶರಣ್ಯ ನಾಪತ್ತೆಯಾಗಿ ೪ ದಿನಗಳಾದರೂ ಯಾವುದೇ ಸುಳಿವು ದೊರಕದ ಹಿನ್ನಲೆಯಲ್ಲಿ ಶೋಧ ಕಾರ್ಯಾಚರಣೆಗೆ ಮತ್ತಷ್ಟು ಜನರನ್ನು ಆಧುನಿಕ  ಥರ್ಮಲ್ ಡ್ರೋಣ್ ನಂಥ ಯಂತ್ರೋಪಕರಣಗಳೊಂದಿಗೆ ನಿಯೋಜಿಸಲಾಗಿದೆ.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧ ಚರ್ಚ್‌ಗಳಲ್ಲಿ ಭಾನುವಾರ ಈಸ್ಟರ್ ಹಬ್ಬವನ್ನು ಆಚರಣೆ ಮಾಡಲಾಯಿತು. ಯೇಸುಕ್ರಿಸ್ತನನ್ನು ಶಿಲುಬೆಗೇರಿಸಿದ ಮೂರು ದಿನಗಳ ನಂತರ ಪುನುರುತ್ಥಾನದ ಸ್ಮರಣಾರ್ಥ ಸಾವಿನ ವಿರುದ್ದ ಜಯವನ್ನು ಸಾರುವ ಪ್ರಾರ್ಥನಾ ಗೀತೆಗಳನ್ನು ಗಾಯನ ಮಾಡಲಾಯಿತು. ದೊಡ್ಡಬಳ್ಳಾಪುರದ ಸಂತ ಪೇತ್ರರ ಚರ್ಚ್‌ನಲ್ಲಿ ನಡೆದ ಆರಾಧನಾ ಆಚರಣೆಯಲ್ಲಿ ಧರ್ಮಕೇಂದ್ರದ ಫಾಧರ್ ಟೆರಿ ಪ್ರಕಾಶ್ ನೇತೃತ್ವ ವಹಿಸಿದ್ದರು.

ಯೇಸುಕ್ರಿಸ್ತನನ್ನು ಶಿಲುಬೆಗೇರಿಸಿದ ದಿನವಾದ ಶುಭ ಶುಕ್ರವಾರವನ್ನು ಗುಡ್ ಫ್ರೈಡೇಯನ್ನಾಗಿ ಆಚರಿಸಿ, ಭಾನುವಾರದಂದು ಈಸ್ಟರ್ ನೊಂದಿಗೆ ಈ ಆಚರಣೆಗಳು ಮುಕ್ತಾಯವಾಗುತ್ತವೆ.

***************

ಕೊಡಗು ಜಿಲ್ಲೆಯ ನಾಪೋಕ್ಲು ಗ್ರಾಮದಲ್ಲಿಂದು ಕೊಡವ ಕುಟುಂಬಗಳ ನಡುವಿನ ೨೬ನೇ ವರ್ಷದ ಹಾಕಿ ಪಂದ್ಯಾವಳಿಗೆ ಚಾಲನೆ ದೊರಕಿತು.

*******ಮುಕ್ತಾಯ********